# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 219(314) |
| ಸದಸ್ಯರ ಹೆಸರು | : | ಶ್ರೀ ಬಿ.ಎಂ.ಫಾರೂಖ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 17.02.2022 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕರಾವಳಿ ವಲಯದಲ್ಲಿ ಇತ್ತೀಚೆಗೆ ನೈತಿಕ ಪೊಲೀಸ್‌ಗಿರಿ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರಾವಳಿ ವಲಯದಲ್ಲಿ ನೈತಿಕ ಪೊಲೀಸ್ ಗಿರಿ ವಿಷಯ ಗಮನಕ್ಕೆ ಬಂದ ತಕ್ಷಣ ಪ್ರಕರಣಗಳು ದಾಖಲು ಮಾಡಿ, ಕೂಡಲೇ ಕ್ರಮ ಜರುಗಿಸಲಾಗುತ್ತಿದೆ. |
| (ಆ) | ಹೌದಾದಲ್ಲಿ, ಇದುವರೆವಿಗೂ ದಾಖಲಾದ ಪ್ರಕರಣಗಳೆಷ್ಟು; | ಕರಾವಳಿ ವಲಯದಲ್ಲಿ ಕಳೆದ ಮೂರು ವರ್ಷಗಳಿಂದ ಇತ್ತೀಚಿನವರೆಗೆ ನೈತಿಕ ಪೊಲೀಸ್‌ಗಿರಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಒಟ್ಟು 31 ಪ್ರಕರಣಗಳು ದಾಖಲಾಗಿದ್ದು ವರ್ಷವಾರು ಹಾಗೂ ಜಿಲ್ಲಾವಾರು ವಿವರ ಕೆಳಗಿನಂತಿದೆ. (table below) |
| (ಇ) | ನೈತಿಕ ಪೊಲೀಸ್‌ಗಿರಿ ಹತ್ತಿಕ್ಕಲು ಸರ್ಕಾರವು ಕೈಗೊಂಡ ಕ್ರಮಗಳೇನು ? | ನೈತಿಕ ಪೊಲೀಸ್ ಗಿರಿ ಹತ್ತಿಕ್ಕಲು ಕೈಗೊಂಡ ಕ್ರಮ:<br>1. ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬೀಟ್ ಸಿಬ್ಬಂದಿಯವರನ್ನು ನೇಮಿಸಿ, ತಿಂಗಳಿಗೆ 2 ಬಾರಿ ಸಾರ್ವಜನಿಕ ಸಭೆ ನಡೆಸಿ ಸಾರ್ವಜನಿಕರಿಗೆ ತಿಳುವಳಿಕೆ ನೀಡಲಾಗುತ್ತಿದೆ.<br>2. ಪೊಲೀಸ್ ಠಾಣಾ ವ್ಯಾಪ್ತಿಯ ಸ್ಥಳೀಯ ಪೊಲೀಸ್ ಅಧಿಕಾರಿಗಳು ಯಾವುದೇ ಘಟನೆ ಗಮನಕ್ಕೆ ಬಂದ ತಕ್ಷಣ ಸ್ಥಳಕ್ಕೆ ಕೂಡಲೇ ಭೇಟಿ ನೀಡಿ ಪ್ರಕರಣ ದಾಖಲಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲು ಸೂಕ್ತ ನಿರ್ದೇಶನ ನೀಡಲಾಗಿದೆ. |

| ಕ್ರ ಸಂ | ಘಟಕ | ಪ್ರಕರಣಗಳ ಸಂಖ್ಯಾವಾರು ವಿವರ | | | |
|---|---|---|---|---|---|
| | | 2019 | 2020 | 2021 | 2022 |
| 1. | ಮಂಗಳೂರು ನಗರ | 03 | 01 | 07 | 0 |
| 2. | ದಕ್ಷಿಣ ಕನ್ನಡ | 0 | 04 | 07 | 01 |
| 3. | ಉತ್ತರ ಕನ್ನಡ | 0 | 01 | 01 | 0 |
| 4. | ಉಡುಪಿ | 01 | 02 | 02 | 01 |
| ಒಟ್ಟು | | 04 | 08 | 17 | 02 |

| | | |
|---|---|---|
| | | 3. ಜಿಲ್ಲೆಯಲ್ಲಿ ಚೆಕ್ ಪೋಸ್ಟ್‌ಗಳನ್ನು ನಿರ್ಮಿಸಲಾಗಿದ್ದು, ಸಿಸಿಟಿವಿಗಳನ್ನು ಅಳವಡಿಸಲಾಗಿದೆ ಹಾಗೂ ದಿನದ 24x7 ಪೊಲೀಸ್ ಅಧಿಕಾರಿಗಳು/ಸಿಬ್ಬಂದಿಯವರನ್ನು ಕರ್ತವ್ಯಕ್ಕೆ ನೇಮಿಸಲಾಗಿರುತ್ತದೆ.<br>4. ಜಿಲ್ಲೆಯ ಎಲ್ಲಾ ರೌಡಿ ಶೀಟರ್ ಗಳ ಮತ್ತು ಕಮ್ಯೂನಲ್ ಗೂಂಡಾಗಳ ಚಲನ-ವಲನದ ಮೇಲೆ ನಿಗಾ ಇಡಲಾಗಿದೆ.<br>5. ಸಂಘ ಸಂಸ್ಥೆಗಳ ಮುಖಂಡರುಗಳು ಹಾಗೂ ಕಾರ್ಯಕರ್ತರುಗಳಿಗೆ ಸೂಕ್ತ ತಿಳುವಳಿಕೆ ನೀಡಿ ಮತ್ತು ಅವರ ಕಾರ್ಯಕ್ರಮಗಳ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ, ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ. |

**ಹೆಚ್‌ಡಿ 47 ಎಸ್‌ಎಸ್‌ಟಿ 2022**

(ಆರಗ ಜ್ಞಾನೇಂದ್ರ)
**ಗೃಹ ಸಚಿವರು**